ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-01**

**ಸಂಖ್ಯೆ:ಸಿ4(4)ಶಾ.ದಾ.ಸಂ/2023-24** **ದಿನಾಂಕ:26.07.2023**

**ಸುತ್ತೋಲೆ**

**ವಿಷಯ:** ಮಣಿಪುರ ರಾಜ್ಯದಲ್ಲಿ ಪ್ರಸ್ತುತ ಉಂಟಾಗಿರುವ ಪ್ರಕ್ಷುಬ್ಧ ಪರಿಸ್ಥಿತಿಯಂದಾಗಿ ವಲಸೆ ಬಂದು 2023-24ನೇ ಸಾಲಿಗೆ ದಾಖಲಾತಿ ಬಯಸುವ 1 - 10 ನೇ ತರಗತಿ ವಿದ್ಯಾರ್ಥಿಗಳಿಗೆ ಕರ್ನಾಟಕ ರಾಜ್ಯ ಪಠ್ಯ ಕ್ರಮ ಶಾಲೆಗಳಿಗೆ ದಾಖಲಾತಿ ಅನುಮತಿ ನೀಡುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿಯ ಜ್ಞಾಪನ ಪತ್ರ ಸಂಖ್ಯೆ: ಎಡಿಎಂ2(4)/ರಾಜ್ಯ ನೆರೆ/42/2019-20 ದಿನಾಂಕ: 13.08.2019.
2. ಈ ಕಛೇರಿ ಸುತ್ತೋಲೆ ಸಂಖ್ಯೆ: ಎಡಿಎಂ2(4)/ಮ.ಶಿ.ಹ-22/2020-21 ದಿನಾಂಕ: 08.01.2021.

* * * * * * * * *

ವಿಷಯಕ್ಕೆ ಸಂಬಂಧಿಸಿದಂತೆ, ಮಣಿಪುರ ರಾಜ್ಯದಲ್ಲಿನ ಪ್ರಸ್ತುತ ಪ್ರಕ್ಷುಬ್ಧ ಪರಿಸ್ಥಿತಿಯಿಂದಾಗಿ ಅಲ್ಲಿನ ರಾಜ್ಯದಲ್ಲಿ 1 ರಿಂದ 10ನೇ ತರಗತಿ ವಿದ್ಯಾರ್ಥಿಗಳು ಕರ್ನಾಟಕ ರಾಜ್ಯಕ್ಕೆ ರಾಜ್ಯ ಪಠ್ಯ ಕ್ರಮ ಅನುಸರಿಸುತ್ತಿರುವ ಶಾಲೆಗಳಿಗೆ ದಾಖಲಾತಿ ಬಯಸಿ ಬರುತ್ತಿದ್ದಾರೆ. ಅಂತಹ ವಿದ್ಯಾರ್ಥಿಗಳ ಶಾಲಾ ದಾಖಲಾತಿಗಾಗಿ ಅವಶ್ಯ ದಾಖಲೆಗಳು/ಪ್ರಮಾಣ ಪತ್ರಗಳು/ವರ್ಗಾವಣೆ ಪತ್ರಗಳು ಹಾಗೂ ಇನಿತರೆ ಶಾಲೆಗೆ ಸಂಬಂಧಿಸಿದ ದಾಖಲೆಗಳು ಲಭ್ಯವಿಲ್ಲದಿದ್ದಲ್ಲಿ, ಇದನ್ನು ವಿಶೇಷ ಪ್ರಕರಣವೆಂದು 2023-24ನೇ ಸಾಲಿಗೆ ಮಾತ್ರ ಪರಿಗಣಿಸಿ ಈ ಕಛೇರಿ ಜ್ಞಾಪನ ಸಂಖ್ಯೆ ಎಡಿಎಂ2(4)/ರಾಜ್ಯ ನೆರೆ/42/2019-20 ದಿನಾಂಕ: 13.08.2019ರ ಸುತ್ತೋಲೆಯಂತೆ ದಾಖಲಾತಿ ಮಾಡಿಕೊಳ್ಳುವಾಗ ಜನನ ಪ್ರಮಾಣ ಪತ್ರ/ವರ್ಗಾವಣೆ ಪ್ರಮಾಣ ಪತ್ರ ಅಥವಾ ಯಾವುದೇ ದಾಖಲೆಗಳು ನೀಡುವಂತೆ ಒತ್ತಾಯಿಸದೆ ವಿದ್ಯಾರ್ಥಿ/ಪಾಲಕರಿಂದ ಸ್ವಯಂ ದೃಢೀಕೃತ ಪತ್ರವನ್ನು ಪಡೆದು ವಿದ್ಯಾರ್ಥಿಯು ಹಿಂದಿನ ಶಾಲೆಯಲ್ಲಿ ಯಾವ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುತ್ತಾರೆಯೋ ಅದೇ ತರಗತಿಗಳಿಗೆ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಶಾಲೆಗಳಲ್ಲಿ ದಾಖಲಾತಿ ಮಾಡಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಿದೆ.

**ಆಯುಕ್ತರು**
**ಶಾಲಾ ಶಿಕ್ಷಣ ಇಲಾಖೆ,**
**ಬೆಂಗಳೂರು**

**ಗೆ**

ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆ, ಇವರಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು
1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ನಿರ್ದೇಶಕರು (ಪರೀಕ್ಷೆಗಳು) ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, ಮಲ್ಲೇಶ್ವರಂ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.

4. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ. ಹೊಸಕೇರೆಹಳ್ಳಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
5. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ
6. ರಾಜ್ಯದ ಎಲ್ಲಾ ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಇವರಿಗೆ ಮಾಹಿತಿಗಾಗಿ ಹಾಗು ಅಗತ್ಯ ಕ್ರಮಕ್ಕಾಗಿ ಪ್ರಾಥಮಿಕ ಶಕರು (ಪ್ರಾಥಮಿಕ ಶಿಕ್ಷಣ) ಬೆಂಗಳೂರು ಇವರಿಗೆ ಮಾಹಿತಿಗಾಗಿ.
7. ಕಛೇರಿ ಪ್ರತಿ.